ಕರ್ನಾಟಕ ಸರ್ಕಾರದ ನಡವಳಿಗಳು

ಜಲ ಸಂಪನ್ಮೂಲ ಇಲಾಖೆ

**ವಿಷಯ:–** ಹಾವೇರಿ ಜಿಲ್ಲೆ, ಹಾನಗಲ್ಲ ತಾಲ್ಲೂಕಿನ ಬಾಳಂಬೀಡ ಹಾಗೂ ಇತರೆ ಗ್ರಾಮಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತಿಯ 162 ಕೆರೆಗಳಿಗೆ ವರದಾ ನದಿಯಿಂದ ನೀರು ತುಂಬಿಸುವ ರೂ.386.55 ಕೋಟಿ ಮೊತ್ತದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:–** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕೆಎನ್ಎನ್/ಬಾಳಂಬೀಡ ಕೆರೆ ತುಂಬಿಸುವ ಯೋಜನೆ/2019–20/2878 ದಿನಾಂಕ:05.09.2019.

-----***-----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ಹಾವೇರಿ ಜಿಲ್ಲೆ, ಹಾನಗಲ್ಲ ತಾಲ್ಲೂಕಿನ ಬಾಳಂಬೀಡ ಹಾಗೂ ಇತರೆ ಗ್ರಾಮಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತಿಯ 162 ಕೆರೆಗಳನ್ನು ಅವುಗಳ ಸಾಮರ್ಥ್ಯದ ಶೇ.50 ರಷ್ಟು ತುಂಬಿಸಿ ಆ ಭಾಗದ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಹಾಗೂ ಅಂತರ್ಜಲ ಮಟ್ಟ ವೃದ್ಧಿಸಲು, ಸದರಿ 162 ಕೆರೆಗಳಿಗೆ ವರದಾ ನದಿಯಿಂದ ನೀರು ತುಂಬಿಸುವ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ., ರವರು ತಿಳಿಸಿರುತ್ತಾರೆ.

ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:03.07.2019ರಲ್ಲಿ ಜರುಗಿದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 58ನೇ ಸಭೆಯಲ್ಲಿ ತೀರುವಳಿ ಪಡೆಯಲಾಗಿದೆ ಎಂದು ತಿಳಿಸುತ್ತಾ, ಮುಂಬರುವ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಿ, ತೀರುವಳಿ ಪಡೆಯಲಾಗುವುದು ಎಂದು ತಿಳಿಸಿ, ಕರ್ನಾಟಕ ನೀರಾವರಿ ನಿಗಮದ ಮಂಡಳಿಯ ತೀರುವಳಿಯನ್ನು ಕಾಯ್ದಿರಿಸಿ, ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ., ರವರು ತಮ್ಮ ಪತ್ರದಲ್ಲಿ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಕರ್ನಾಟಕ ನೀರಾವರಿ ನಿಗಮದ ಮಂಡಳಿಯ ಸಭೆಯಲ್ಲಿ ಸದರಿ ಯೋಜನೆಯ ವಿವರವಾದ ವರದಿಯನ್ನು ಮಂಡಿಸಿ, ಅನುಮೋದನೆ ಪಡೆಯುವ ಕ್ರಮವನ್ನು ಪಾಲಿಸುವ ಷರತ್ತಿಗೆ ಒಳಪಟ್ಟು, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 26 ಎಂಎಂಬಿ 2017, ಬೆಂಗಳೂರು, ದಿನಾಂಕ:09.10.2019.**

ಹಾವೇರಿ ಜಿಲ್ಲೆ, ಹಾನಗಲ್ಲ ತಾಲ್ಲೂಕಿನ ಬಾಳಂಬೀಡ ಹಾಗೂ ಇತರೆ ಗ್ರಾಮಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತಿಯ 162 ಕೆರೆಗಳಿಗೆ ವರದಾ ನದಿಯಿಂದ ನೀರು ತುಂಬಿಸುವ, 2018–19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.386.55 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಾಗಿ ರೂ.250.00 ಕೋಟಿಗಳನ್ನು ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಕರ್ನಾಟಕ ಸರ್ಕಾರದ (ವ್ಯವಹಾರಗಳ ನಿರ್ವಹಣೆ) ನಿಯಮಗಳು, 1977 ರ ಭಾಗ–1 ರ ನಿಯಮ–17 ರ ಉಪ ನಿಯಮ (2)ರ ಪರಂತುಕದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

9/10/19

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ–1).
ಜಲ ಸಂಪನ್ಮೂಲ ಇಲಾಖೆ

...2

ಪ್ರತಿಯನ್ನು:

1) ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2) ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3) ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ), ಪ್ರಕರಣ ಸಂ:ಸಿ: 567/2019 ದಿನಾಂಕ: 03.10.2019 ರನ್ವಯ ಕಳುಹಿಸಿದೆ.
5) ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
7) ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
8) ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.